ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:ಆ-1/161/ಸು/2020

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ,
ಬೆಂಗಳೂರು-560001, ದಿನಾಂಕ 04-06-2021

**ಸುತ್ತೋಲೆ**

ಉಲ್ಲೇಖ:1. ಸಂಖ್ಯೆ:ಕವಿಪ:ಆ-1/161/ಸು/2018 ದಿನಾಂಕ 27-04-2021
2. ಸಂಖ್ಯೆ:ಕವಿಪ:ಆ-1/161/ಸು/2021 ದಿನಾಂಕ 10-05-2021 – 22-05-2021

******

ಕರ್ನಾಟಕ ರಾಜ್ಯದಲ್ಲಿ ಕೊರೋನ ವೈರಸ್ (ಕೋವಿಡ್-19)ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಕಾಲ ಕಾಲಕ್ಕೆ ನೀಡಿರುವ ನಿರ್ದೇಶನದನ್ವಯ ದಿನಾಂಕ 06-06-2021ರವರೆಗೆ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರರಿಗೆ ಮೇಲ್ಕಂಡ ಉಲ್ಲೇಖಿತ ಸುತ್ತೋಲೆಗಳನ್ವಯ ಹಾಜರಾತಿಯಿಂದ ವಿನಾಯಿತಿಯನ್ನು ನೀಡಲಾಗಿತ್ತು. ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ: ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ 03-06-2021 ರಂದು ಹೊರಡಿಸಿರುವ ಆದೇಶದಲ್ಲಿ ದಿನಾಂಕ 14-06-2021ರ ಬೆಳಿಗ್ಗೆ 6-00 ಗಂಟೆಯವರೆಗೆ ಜಾರಿಯಲ್ಲಿರುವಂತೆ ಲಾಕ್‌ಡೌನ್ ಅನ್ನು ಮುಂದುವರೆಸಿರುತ್ತದೆ.

ದಿನಾಂಕ 27-04-2021ರಿಂದ 06-06-2021ರ ವರೆಗೆ ಕಛೇರಿ ಹಾಜರಾತಿಯಿಂದ ವಿನಾಯಿತಿ ನೀಡಲಾಗಿದ್ದ ಕಾರಣದಿಂದಾಗಿ ಸಚಿವಾಲಯದ ದೈನಂದಿನ ಕೆಲಸಗಳು ಹಾಗೂ ಇತರ ಕೆಲಸಗಳು ಬಾಕಿ ಉಳಿದುಕೊಂಡಿರುತ್ತವೆ.

ಆದುದರಿಂದ ದಿನಾಂಕ 07-06-2021ರಿಂದ ವಿಧಾನ ಪರಿಷತ್ತಿನ ಸಚಿವಾಲಯದ ಅಧೀನ ಕಾರ್ಯದರ್ಶಿ ಮೇಲ್ಪಟ್ಟ ಎಲ್ಲಾ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದ್ದು (ದೃಷ್ಟಿಹೀನ ಹಾಗೂ ಇತರ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ಸಿಬ್ಬಂದಿ ಮತ್ತು ಗರ್ಭಿಣಿ ಮಹಿಳಾ ಸಿಬ್ಬಂದಿಗಳನ್ನು ಹೊರತುಪಡಿಸಿ) ಹಾಗೂ ಅಧೀನ/ಉಪ ಕಾರ್ಯದರ್ಶಿಗಳು ತಮ್ಮ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 'ಬಿ' 'ಸಿ' ಮತ್ತು 'ಡಿ' ಗುಂಪಿನ ಅಧಿಕಾರಿ/ನೌಕರರನ್ನು ತಮ್ಮ ವ್ಯಾಪ್ತಿಗೊಳಪಡುವ ಶಾಖೆಯ ಕಾರ್ಯಗಳ ಅವಶ್ಯಕತೆಗನುಗುಣವಾಗಿ ಕರೆಸಿಕೊಳ್ಳುವ ತೀರ್ಮಾನ ತೆಗೆದುಕೊಳ್ಳಬಹುದಾಗಿರುತ್ತದೆ.

ಶಾಸಕರ ಭವನದ ಕೆಲಸ ಕಾರ್ಯಗಳಿಗೆ ಸಂಬಂಧಿಸಿದಂತೆ ಅಧಿಕಾರಿ/ನೌಕರರುಗಳು ಅಲ್ಲಿನ ಕಾರ್ಯಗಳ ಅಗತ್ಯತೆಗೆ ಅನುಗುಣವಾಗಿ ಉಪ ಕಾರ್ಯದರ್ಶಿ(ಪ್ರ)/ಸಹಾಯಕ ಕ್ಷೇತ್ರಾಧಿಕಾರಿಗಳು ನಿಯೋಜಿಸಿದಂತೆ ಕಾರ್ಯನಿರ್ವಹಿಸುವುದು.

ಈ ಸುತ್ತೋಲೆಯು ದಿನಾಂಕ 13-06-2021ರ ವರೆಗೆ ಜಾರಿಯಲ್ಲಿರುತ್ತದೆ.

(ಕೆ.ಆರ್.ಮಹಾಲಕ್ಷ್ಮಿ)
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಗೆ,

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ,
(ಶಾಸಕರ ಭವನವೂ ಸೇರಿದಂತೆ)

ಪ್ರತಿಗಳು:-

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕ.ವಿ.ಪ.
2. ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕ.ವಿ.ಪ.
3. ಮಾನ್ಯ ವಿರೋಧ ಪಕ್ಷದ ನಾಯಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
4. ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
5. ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
6. ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕ, ಕ.ವಿ.ಪ.
7. ಆಂತರಿಕ ಆರ್ಥಿಕ ಸಲಹೆಗಾರರು/ಆರ್ಥಿಕ ಅಧಿಕಾರಿಯವರಿಗೆ, ಕ.ವಿ.ಪ.
8. ಗಣಕ ಕೇಂದ್ರ, ಕ.ವಿ.ಪ.
9. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಹಾಗೂ ಶಾಸಕರ ಭವನದ ಸೂಚನಾ ಫಲಕಗಳಿಗೆ
10. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ ಕ.ವಿ.ಪ.